I/246886/2022

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ 33000 ಗ್ರಾಮ ಪಂಚಾಯಿತಿ ಕೆರೆಗಳ ಪೈಕಿ ಪ್ರಾರಂಭಿಕ ಹಂತವಾಗಿ 1000 ಕೆರೆಗಳನ್ನು ಗುರುತಿಸಿ ಸಮಗ್ರವಾಗಿ ಅಭಿವೃದ್ಧಿ ಪಡಿಸಲು ಅನುಮೋದನೆ ನೀಡುವ ಕುರಿತು.

**ಉಲ್ಲೇಖ:** 2022-23ನೇ ಸಾಲಿನ ರಾಜ್ಯದ ಆಯವ್ಯಯ ಕಂಡಿಕೆ-216 ರಲ್ಲಿನ ಘೋಷಣೆ ದಿನಾಂಕ: 04.03.2022

**ಪ್ರಸ್ತಾವನೆ :**

ಪ್ರಾಚೀನ ಕಾಲದಿಂದಲೂ ಕೆರೆಗಳು ನಮ್ಮ ಸಾಮಾಜಿಕ ಹಾಗೂ ಆರ್ಥಿಕ ಚಟುವಟಿಕೆಗಳೊಂದಿಗೆ ಬೆಳೆದು ಬಂದಿವೆ. ನೀರಾವರಿಯು ಕೆರೆಗಳ ಪ್ರಮುಖ ಉಪಯೋಗವಾದರೆ, ಕೆರೆಗಳಿಂದ ಮೀನುಗಾರಿಕೆ, ದನಕರುಗಳಿಗೆ ಕುಡಿಯುವ ನೀರು, ಜನಸಾಮಾನ್ಯರಿಗೆ ಕುಡಿಯುವ ಹಾಗೂ ದಿನ ಬಳಕೆಯ ನೀರು, ಪರಿಸರದ ಬದಲಾವಣೆಗೆ, ಪಶು-ಪಕ್ಷಿಗಳಿಗೆ ಇವುಗಳಿಗೆಲ್ಲ ಕೆರೆಯೇ ಆಧಾರ. ಹೀಗೆ ಹತ್ತಾರು ಬಗೆಯ ಔಚಿತ್ಯವನ್ನು ಕೆರೆಗಳು ಹೊಂದಿವೆ. ಅದಕ್ಕಿಂತಲೂ ಮಹತ್ವದ್ದಾಗಿ ಕೆರೆಗಳಿಂದ ಭೂ ಅಂತರ್ಜಲದ ಪ್ರಮಾಣ ಹೆಚ್ಚಾಗುವುದು ಕಂಡುಬಂದಿದ್ದು, ಕೆಲವು ಕೆರೆಗಳನ್ನು ಅಂತರ್ಜಲ ಹೆಚ್ಚಿಸಲೆಂದೇ ನಿರ್ಮಿಸಲಾಗಿದೆ.

ಇತ್ತೀಚಿನ ದಿನಗಳಲ್ಲಿ ಹವಾಮಾನ ವೈಪರೀತ್ಯದಿಂದಾಗಿ ಏರುತ್ತಿರುವ ಜಾಗತಿಕ ತಾಪಮಾನದಿಂದ ಅಂತರ್ಗತ ಜಲಮೂಲಗಳು ಬತ್ತಿ ಹೋಗುತ್ತಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿಗಾಗಿ ಹಾಗೂ ಕೃಷಿ ಚಟುವಟಿಕೆಗಳಿಗೆ ಅತ್ಯಾವಶ್ಯಕವಾಗಿ ಅಗತ್ಯವಿರುವ ನೀರಿಗಾಗಿ ಹಾಹಾಕಾರ ತಲೆದೋರುತ್ತಿರುವುದನ್ನು ಮನಗಂಡು ಇದಕ್ಕೆ ಪೂರಕವಾಗಿ ಪರಿಹಾರ ಮಾರ್ಗವನ್ನು ರೂಪಿಸುವ ಉದ್ದೇಶದಿಂದ 2022-23 ನೇ ಸಾಲಿನ ರಾಜ್ಯ ಆಯವ್ಯಯದಡಿ ಘೋಷಿಸಲಾದಂತೆ, ರಾಜ್ಯದ 33000 ಗ್ರಾಮ ಪಂಚಾಯಿತಿ ಕೆರೆಗಳ ಪೈಕಿ ಪ್ರಸ್ತುತ ಪ್ರಾರಂಭಿಕ ಹಂತವಾಗಿ 1000 ಕೆರೆಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲು ಸರ್ಕಾರ ಉದ್ದೇಶಿಸಿದೆ.

ರಾಜ್ಯದ ಆಯ್ದ 1000 ಗ್ರಾಮ ಪಂಚಾಯಿತಿ ಕೆರೆಗಳನ್ನು ಗುರುತಿಸಿ ಸಮಗ್ರವಾಗಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೆರೆಯನ್ನು ಸರ್ವೇ ಮಾಡಿ ಒತ್ತುವರಿ ಆಗದಂತೆ ಗಡಿಯನ್ನು ಗುರುತಿಸಿ ಹದ್ದುಬಸ್ತು ಪಡಿಸುವುದು (ಬೌಂಡರಿ ಫಿಕ್ಸ್ ಮಾಡುವುದು), ಕೆರೆಯ ಸುತ್ತ ಟ್ರೆಂಚ್ ತೆಗೆಸುವುದು, ಕೆರೆಗಳಲ್ಲಿನ ಹೂಳನ್ನು ಎತ್ತಿ ನೀರು ಸಂಗ್ರಹಣಾ ಸಾಮರ್ಥ್ಯ ಹೆಚ್ಚಿಸುವುದು, ಬೆಳೆದಿರುವ ಗಿಡ-ಗಂಟೆಗಳನ್ನು ತೆಗೆಯುವುದು, ಕೆರೆ ಏರಿ ಭದ್ರ ಪಡಿಸುವುದು, ಕೆರೆ ತೂಬು ಮತ್ತು ಕೋಡಿ ದುರಸ್ತಿಗೊಳಿಸುವುದು, ಕೆರೆಗೆ ನೀರು ಹರಿದು ಬರುವ ಪೋಷಕ ಕಾಲುವೆಗಳ ಪುನಶ್ಚೇತನಗೊಳಿಸುವುದು, ಪಿಚ್ಚಿಂಗ್ ಮತ್ತು ರಿವಿಟ್‌ಮೆಂಟ್ ಮಾಡುವುದು ಮತ್ತು ಕೆರೆ ಅಂಚಿನ ಖಾಲಿ ಪ್ರದೇಶದಲ್ಲಿ ಸಸಿಗಳನ್ನು ಬೆಳೆಸುವುದು (ಅರಣ್ಯೀಕರಣ), ಮತ್ತು ಕೆರೆಯ ಅಂಗಳವನ್ನು ಸುಂದರೀಕರಣಗೊಳಿಸುವ ಮುಂತಾದ ಚಟುವಟಿಕೆಗಳನ್ನು ಅನುಷ್ಠಾನಗೊಳಿಸುವುದು.

ಯೋಜನೆಗೆ ತಗಲುವ ವೆಚ್ಚವನ್ನು ಸರ್ಕಾರದಿಂದ ಬಿಡುಗಡೆ ಮಾಡುವ ಅನುದಾನದೊಂದಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಗ್ರಾಮ ಪಂಚಾಯಿತಿಯ ಸ್ವಂತ ಸಂಪನ್ಮೂಲ, ತಾಲ್ಲೂಕು ಪಂಚಾಯಿತಿ /ಜಿಲ್ಲಾ ಪಂಚಾಯಿತಿಗಳಲ್ಲಿ ಲಭ್ಯವಿರುವ ಅನುದಾನ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನ (MLA.LAD Fund), ಸಾಮಾಜಿಕ ಹೊಣೆಗಾರಿಕೆ ಕಾರ್ಯನೀತಿ ನಿಧಿ (CSR Fund), ದೇಣಿಗೆ ನೀಡುವ ಅನುದಾನಗಳನ್ನು ಬಳಸಿಕೊಂಡು ಒಗ್ಗೂಡಿಸುವ ಮೂಲಕ ಅನುಷ್ಠಾನಗೊಳಿಸಲಾಗುವುದು.

ಆಯ್ಕೆ ಮಾಡುವ ಕೆರೆಗಳಲ್ಲಿ ಈ ಕಾರ್ಯಕ್ರಮಗಳನ್ನು ಸಮಗ್ರವಾಗಿ ಅನುಷ್ಠಾನಗೊಳಿಸಲು 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಸರ್ಕಾರವು ರೂ.100.00 ಕೋಟಿಗಳ ಅನುದಾನವನ್ನು ಒದಗಿಸುವ ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:42:ಸುಗ್ರಾಯೋ:2022, (ಇ-743802) ಬೆಂಗಳೂರು, ದಿನಾಂಕ: 18.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯದ 33000 ಗ್ರಾಮ ಪಂಚಾಯಿತಿ ಕೆರೆಗಳ ಪೈಕಿ ಪ್ರಾರಂಭಿಕ ಹಂತವಾಗಿ 1000 ಕೆರೆಗಳನ್ನು ಗುರುತಿಸಿ, ಲೆಕ್ಕ ಶೀರ್ಷಿಕೆ 4702-00-101-9-04ರಡಿ ಕೆರೆಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ರೂ.100.00 ಕೋಟಿಗಳ ಅನುದಾನವನ್ನು ಒದಗಿಸಲು ಅನುಮೋದನೆ ನೀಡಿದೆ.

ಈ ಅನುದಾನವನ್ನು ಬಳಸಿಕೊಂಡು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, ಗ್ರಾಮ ಪಂಚಾಯಿತಿಯ ಸ್ವಂತ ಸಂಪನ್ಮೂಲ, ತಾಲ್ಲೂಕು ಪಂಚಾಯಿತಿ / ಜಿಲ್ಲಾ ಪಂಚಾಯಿತಿಗಳಲ್ಲಿ ಲಭ್ಯವಿರುವ ಅನುದಾನ, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಅನುದಾನ (MLA.LAD.Fund) , ಸಾಮಾಜಿಕ ಹೊಣೆಗಾರಿಕೆ ಕಾರ್ಯನೀತಿ ನಿಧಿ (CSR Fund) ಮತ್ತು ಇತರೆ ಅನುದಾನಗಳೊಂದಿಗೆ ಒಗ್ಗೂಡಿಸುವ ಮೂಲಕ

18/4/22

/5

I/246886/2022

ಅನುಷ್ಠಾನಗೊಳಿಸುವುದು.

ಕೆರೆಗಳ ಆಯ್ಕೆ ಬಗ್ಗೆ ಹಾಗೂ ಕಾರ್ಯಕ್ರಮ ಅನುಷ್ಠಾನ ಕುರಿತಂತೆ ಪ್ರತ್ಯೇಕವಾಗಿ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು.

ಈ ಆದೇಶವನ್ನು 2022-23 ನೇ ಸಾಲಿನ ಆಯವ್ಯಯದ ಕಂಡಿಕೆ 216ರಲ್ಲಿ ಘೋಷಿಸಲಾದಂತೆ ಹಾಗೂ ಮಾನ್ಯ ಮುಖ್ಯಮಂತ್ರಿಗಳ ಟಿಪ್ಪಣಿ ದಿನಾಂಕ:16.03.2022ರಲ್ಲಿನ ಸೂಚನೆ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**Signed by Shrinivas H Marangappanavar**
**Date: 18-04-2022 13:48:10**

18/4/22

(ಶ್ರೀನಿವಾಸ್ ಹ. ಮಾರಂಗಪ್ಪನವರ)
ನಿರ್ದೇಶಕರು (ಗ್ರಾಮೀಣಾಭಿವೃದ್ಧಿ)
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ,ಬೆಂಗಳೂರು
2. ಮಹಾಲೇಖಪಾಲರು (ಅಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಅಡಿಟ್-1), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
13. ಸರ್ಕಾರದ ಮುಖ್ಯಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ) ವಿಧಾನಸೌಧ, ಬೆಂಗಳೂರು.
14. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ. ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರು.
15. ಆಯುಕ್ತು, ಗ್ರಾ.ಕು.ನೀ. & ನೈ. ಇಲಾಖೆ, ಕಾವೇರಿಭವನ, ಕೆ.ಜಿ. ರಸ್ತೆ, ಬೆಂಗಳೂರು.
16. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ಗಳ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು.
17. ವಿಶೇಷಾಧಿಕಾರಿಗಳೂ (ಜಿ.ಪಂ.) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
18. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರು.
19. ಎಲ್ಲಾ ನಿರ್ದೇಶಕರು, ಗ್ರಾ.ಅ ಮತ್ತು ಪಂ.ರಾಜ್ಇಲಾಖೆ, ಬೆಂಗಳೂರು.
20. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
21. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
22. ರಾಜ್ಯದ ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು.
23. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿಲ್ಲಾ ಪಂಚಾಯತ್, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
24. ಮುಖ್ಯಸ್ಥರು, ಗಣಕಕೋಶ, ಗ್ರಾ. ಪಂ.ರಾಜ್ ಇಲಾಖೆ, ವೆಬ್ ಸೈಟ್ನಲ್ಲಿ ಅಳವಡಿಸಲು
25. ಸಂಪದಾಕರು,ಕರ್ನಾಟಕ ವಿಕಾಸ, ಪತ್ರಿಕೆಯಲ್ಲಿ ಪ್ರಕಟಿಸಲು.
26. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.